ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 2540
2. ಸದಸ್ಯರ ಹೆಸರು : ಶ್ರೀ ಯು.ಬಿ. ವೆಂಕಟೇಶ್
3. ಉತ್ತರಿಸುವ ದಿನಾಂಕ : 24-03-2022.
4. ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಯವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ನಗರದ ಬೊಮ್ಮನಹಳ್ಳಿ ವಲಯದಲ್ಲಿ ಭೂ ಪರಿವರ್ತನೆಗೊಂಡ ಏಕ ನಿವೇಶನಕ್ಕೆ (ಸಂ.ನಂ. 39 ಪುಟ್ಟೇನಹಳ್ಳಿ ಗ್ರಾಮ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ) ಖಾತಾ ಸಂ.1392/39 ನಿಯಮಬಾಹಿರವಾಗಿ ವಿಭಜನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಬಂದಿದೆ.<br><br>ಬೆಂಗಳೂರು ನಗರದ ಬೊಮ್ಮನಹಳ್ಳಿ ವಲಯದಲ್ಲಿ ಭೂಪರಿವರ್ತನೆಗೊಂಡ ಏಕ ನಿವೇಶನ (ಸಂ.ನಂ. 39 ಪುಟ್ಟೇನಹಳ್ಳಿ ಗ್ರಾಮ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ) ಖಾತಾ ಸಂ. 1392/39ಕ್ಕೆ ನಿಯಮಬಾಹಿರವಾಗಿ ಖಾತೆ ವಿಭಜನೆ ಮಾಡಿರುವುದು ಕಂಡು ಬಂದಿದ್ದು, ಕಡತವನ್ನು ಪರಿಶೀಲಿಸಿ ನಿಯಮ ಬಾಹಿರವಾಗಿ ಖಾತೆ ವಿಭಜನೆ ಮಾಡಿರುವುದಕ್ಕೆ ಕಾರಣರಾದ ಸಂಬಂಧಪಟ್ಟ ಅಧಿಕಾರಿಗಳು / ನೌಕರರುಗಳ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮಕೈಗೊಳ್ಳಲಾಗುವುದು. |
| ಆ | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿ.ಬಿ.ಎಂ.ಪಿ) ವ್ಯಾಪ್ತಿಯ ಎಲ್ಲಾ ವಲಯಗಳಲ್ಲಿ ಭೂ ಪರಿವರ್ತನೆಗೊಂಡ ಏಕ ನಿವೇಶನಕ್ಕೆ ವಿಭಜನೆ ಮಾಡಲು ಅವಕಾಶವನ್ನು ಕಲ್ಪಿಸಲಾಗಿದೆಯೇ; ಹಾಗಿದ್ದಲ್ಲಿ, ಸರ್ಕಾರಿ ಆದೇಶದ ಪ್ರತಿ ಒದಗಿಸುವುದು; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿ.ಬಿ.ಎಂ.ಪಿ.) ವ್ಯಾಪ್ತಿಯ ಎಲ್ಲಾ ವಲಯಗಳಲ್ಲಿ ಭೂಪರಿವರ್ತನೆಗೊಂಡ ಏಕ ನಿವೇಶನಕ್ಕೆ ಖಾತಾ ವಿಭಜನೆ ಮಾಡಲು ಅವಕಾಶವಿರುವುದಿಲ್ಲ. |
| ಇ | ಈ ರೀತಿ ಏಕ ನಿವೇಶನವನ್ನು ನಿಯಮ ಮೀರಿ ವಿಭಜನೆ ಮಾಡುವ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಈ ರೀತಿ ಏಕ ನಿವೇಶನವನ್ನು ನಿಯಮ ಮೀರಿ ಖಾತಾ ವಿಭಜನೆ ಮಾಡುವ ಅಧಿಕಾರಿಗಳು / ನೌಕರರುಗಳ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ: ನಅಇ 45 ಬಿಬಿಎಸ್ 2022(ಇ)**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ